ಮೈಸೂರು ಡಿಸ್ಟ್ರಿಕ್ಟ್ ಫಾರೆಸ್ಟ್ ಇಲಾಖೆ.

ನೋಟಿಫಿಕೇಷ್ಣ.

ತಾರೀಖು 6ನೇ ಫಿಬ್ರವರಿ 1895.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಮೈಸೂರು ಡಿಸ್ಟ್ರಿಕ್ಟ್ ನಾರಾಯಣದುರ್ಗ ಫಾರೆಸ್ಟ್ ಬಾಬತು ಈ ಕೆಳಗೆ ವಿವರಿಸಿರುವ ಪಸಾರೆ ಜಿನಸಿಗಳು ಸ್ಯ 1895ನೇ ಇಸವಿ ಮಾರ್ಚಿ ತಾರೀಖು 5ರಲ್ಲು ಮೈಸೂರು ಡಿಸ್ಟ್ರಿಕ್ಟ್ ಫಾರೆಸ್ಟನ ಆಫಿಸರವರಿಂದ ಶ್ರೀರಂಗಪಟ್ಟಣದ ಸಂದಲ್ ಕೋಠಿಯಲ್ಲಿ ಹರಾಜು ಮಾಡಿಸಲ್ಪಡುತ್ತೆ.

ಜಿನಸು ತಪ್ಸೀಲ್.	ಸುಮಾರು ಮೊತ್ತ.	
	ಮಣ.	ಪೌ.
ಅಳಲೆಕಾಯಿ	2000	..
ಆರಗು	130	..

ಷರತ್ತು—ಮೈಸೂರು ಗೆಜೆಟ್ 93ನೇ ಜನವರಿ 12ನೇ ಮಕ್ಕಮಿನಲ್ಲಿ ಚಲವಣಿ ಮತ್ತು ಬೊಂಬು ವಿಷಯದಲ್ಲಿ ಘಾಯಿಷ್ ಮಾಡಿರುವ 1892ನೇ ಇಸವಿ ನವಂಬರು 29ನೇ ಮಕ್ತುಂ 7953-ಆರ್. ಎಫ್. 155—92ನೇ ನಂಬರ್ ಗವರ್ಣಮೆಂಟ್ ನೋಟಿಫಿಕೇಷ್ಣ ಮೇರೆ.

ಟಿ. ಅಬ್ದುಲ್‌ಕರೀಮ್,
ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರ್.

ಹಾಸನ ಡಿಸ್ಟ್ರಿಕ್ಟ್.

ತಾರೀಖು 10ನೇ ಜನವರಿ 1895.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಕಂದಾಯದ ಬಾಕೀದಾರರಾದ ಈ ಕೆಳಗೆ ನಮೂದಿಸುವ ಜೋಡೀದಾರ್ರಿಂದ ಬರಬೇಕಾದ ಜಮ್ಮಾ ಕಂದಾಯದ ಬಾಕಿಗಾಗಿ ಹಿಡುವಳಿ ಹಕ್ಕು ತಪ್ಪಿಸಲ್ಪಟ್ಟು ಇಥೆಯಂದು ಪ್ರಕಟಿಸಲ್ಪಟ್ಟಿರುವ ಇದರಡಿ ನಮೂದಾಗುವ ಸ್ಥಿರಸ್ವತ್ತು ಹಾಸನ ಡಿಸ್ಟ್ರಿಕ್ಟು ಬೇಲೂರು ತಾಲ್ಲೂಕು ಕಚೇರಿಯಲ್ಲಿ ಈ ಕೆಳಗೆ ನಮೂದಾಗುವ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇಥೆ. 3000—0—0 ರೂಪಾಯಿಗಳನ್ನ ಪ್ರಥಮ ಸವಾಲಾಗಿಟ್ಟುಕೊಂಡು ಹರಾಜು ಮಾಡಿಸಲ್ಪಡುತ್ತೆ.

ಹರಾಜು ಆ ದಿವಸ ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡ ದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1894—95ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರಿಗೆ 828—1—3 ಪೈ ಆಗಿರುತ್ತೆ.

3. ಹರಾಜ್ ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25ನ್ನ ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೆ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನ ಹಾಜರ್ಮಾಡಿದವನು ಕಳದು ಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ, ಯಾ ಏಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅವರು ಅದನ್ನು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಿಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ಸೈ೯ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯುಟಿ ಕಮ್ಮಿಷನರವರಿಗೆ ಅಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪೀಲಿನಲ್ಲಿ ಆಗುವ ಫೈನಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಪೀಲ್.						ಸರ್ಕಾರಕ್ಕೆ ಬರಬೇಕಾದ ನೋಟೀಸು ಫೀ ವಗೈರೆ ಸಮೇತವಾದ ಬಾಕೀ ಮೊಬಲಗು.			ಹರಾಜು ತಾರೀಖು.	1893–94ನೇ ಸಾಲಿಗೆ ಹರಾಜಿನಲ್ಲಿ ಪಡೆದ ನಿವ್ವಳ ಸ್ವತ್ತಿಗಾಗಿ ಕೊಡಬೇಕಾದ ಮೊಬಲಗು.
				ಕಟ್ಟಡಗಳು.		ಜಮೀನು.								
				ಕಟ್ಟಡದ ಹೆಸರು.	ಅಂದಾಜು ಕಿಮ್ಮತ್ತು.	ನಂಬರ್ ಅಥವಾ ಜಮೀನಿನ ಹೆಸರು.	ಖುಷ್ಕೀ ತರೀ ಪರಂಪೋಕ ಜುಮ್ಲಾ ಸರ್ಕಾರಕ್ಕೆ ಸಾಲಿಯಾನಾ ಕೊಡಬೇಕಾದ ಜೋಡೀ ಲೋಕಲ್‌ಫಂಡ್	ವಿಸ್ತೀರ್ಣ.	ಅಕಾರ.						
1	2	3	4	5	6	7	8	9	10			11			12	13
								ಎಕರೆ.	ಗು.	ರೂ.	ಆ.	ಪೈ.	ರೂ.	ಆ.	ಪೈ.	
ಚೋಳೂರು.	ಕನಿವಾರನಂಕೆ	ಜೋಡೀ ಮೇಲನಹಳ್ಳಿ	ಸುಬ್ಬಾವಧಾನಿ ವಗೈರೆ ರಾಮಕೃಷ್ಣಾವಧಾನಿ ವಗೈರೆ ಲಕ್ಷ್ಮೀಪತಿ ಭಟ್ಟ ಗೋಪಾಲಯ್ಯ ವಗೈರೆ	..	..	1	ಖುಷ್ಕೀ	162	2	37	0	0	828	1	3	1895ನೇ ಮಾರ್ಚಿ 29ನೇ ಬುಧವಾರ ದಿವಸ 1893–94ನೇ ಸಾಲಿಗೆ 129–4–8 ಪೈ ಮತ್ತು ನೋಟೀಸು ಫೀ ಬಡ್ಡಿ ಸಹ ಹರಾಜು ತಾರೀಖಿನ ವರಗೆ ಕೊಡಬೇಕಾದ ಮೊಬಲಗು.
							ತರೀ	59	36	264	6	7				
							ಪರಂಪೋಕ	53	17	3	4	0				
							ಜುಮ್ಲಾ ..	275	15	304	10	7				
							ಸರ್ಕಾರಕ್ಕೆ ಸಾಲಿಯಾನಾ ಕೊಡಬೇಕಾದ ಜೋಡೀ	..	..	111	0	0				
							ಲೋಕಲ್‌ಫಂಡ್	..	..	18	4	8				
										129	4	8				

ಪಿ. ಎಸ್. ಪೂರ್ಣಯ್ಯ,
ಡೆಪ್ಯುಟಿ ಕಮ್ಮಿಷನರ್.